ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ನೋಂದಣಿ/01/2017-18 ದಿನಾಂಕ 06/12/2017

– ಸುತ್ತೋಲೆ –

ವಿಷಯ : ಏಪ್ರಿಲ್-2018 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಎಸ್.ಎ.ಟಿ.ಎಸ್ ಜಾಲತಾಣದಲ್ಲಿ ಅಪ್‌ಲೋಡ್ ಮಾಡುವ ದಿನಾಂಕವನ್ನು ವಿಸ್ತರಿಸುತ್ತಿರುವ ಬಗ್ಗೆ.

ಉಲ್ಲೇಖ : 1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅನುಮೋದನೆ ದಿನಾಂಕ 13/11/2017

2) ದಿನಾಂಕ 15/11/2017 ರಂದು ರಾಜ್ಯ ಯೋಜನಾ ಕಛೇರಿಯ ಸಭೆಯ ನಡಾವಳಿ

3) ಈ ಕಛೇರಿಯ ಅಧಿಸೂಚನೆ ಸಂ. ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ ಏಪ್ರಿಲ್-2018/2017-18 ದಿನಾಂಕ 08/08/2017 ಹಾಗೂ ಸುತ್ತೋಲೆ ದಿನಾಂಕ 16/11/2017

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ವಿವಿಧ ಚಟುವಟಿಕೆಗಳನ್ನು ಗಣಕೀಕರಣಗೊಳಿಸುವ ನಿಟ್ಟಿನಲ್ಲಿ ಮೊದಲ ಹಂತವಾಗಿ ವಿದ್ಯಾರ್ಥಿಗಳ ನೋಂದಣಿ ಕಾರ್ಯವನ್ನು ಪ್ರತಿ ವರ್ಷದಂತೆ ಓ.ಎಮ್.ಆರ್ ಬಳಸಿ ಮಾಡುವ ಬದಲು ಎಸ್.ಎ.ಟಿ.ಎಸ್ ಆಧಾರಿತ ಮಕ್ಕಳ ಮಾಹಿತಿಯೊಂದಿಗೆ ಹೆಚ್ಚುವರಿ ಮಾಹಿತಿ ಸಂಗ್ರಹಿಸಿ ತಯಾರಿಸಲು ನಿರ್ಧರಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯಲ್ಲಿನ ಏಪ್ರಿಲ್ -2018 ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಆದೇಶಿಸಿ ದಿನಾಂಕ 10/12/2017 ರವರೆಗೆ ಅವಧಿಯನ್ನು ನಿಗಧಿಪಡಿಲಾಗಿತ್ತು.

ಆನ್‌ಲೈನ್ ನೋಂದಣಿ ಕಾರ್ಯದ ಅವಧಿಯನ್ನು ವಿಸ್ತರಿಸುವಂತೆ ಕೋರಿ ಹಲವಾರು ಶೈಕ್ಷಣಿಕ ಸಂಸ್ಥೆಗಳು ಹಾಗೂ ಸಂಘಗಳು ಮನವಿ ಮಾಡಿರುವುದರಿಂದ ಈ ಅವಧಿಯನ್ನು 20 ಡಿಸೆಂಬರ್ 2017 ರ ವರೆಗೆ ವಿಸ್ತರಿಸಲಾಗಿದೆ. ಹತ್ತನೇ ತರಗತಿಯಲ್ಲಿ ಐದುನೂರಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಗಳ ಮುಖ್ಯಶಿಕ್ಷಕರು ಆನ್‌ಲೈನ್‌ನಲ್ಲಿ ಮಾಹಿತಿ ಭರ್ತಿ ಮಾಡುವ ಬಗ್ಗೆ ಏನಾದರೂ ಸಮಸ್ಯೆಗಳಿದ್ದಲ್ಲಿ ಮಂಡಳಿಯಲ್ಲಿನ ತಮ್ಮ ಜಿಲ್ಲೆಗಳ ನೋಡಲ್ ಅಧಿಕಾರಿಗಳನ್ನು ಸಂಪರ್ಕಿಸಲು ಸೂಚಿಸಿದೆ.

(ಸುಮಂಗಲ ವಿ) 6/12

ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ

ಪ್ರತಿಗಳನ್ನು

2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗು ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಅಭಿಯಾನ, ಬೆಂಗಳೂರು
5. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
6. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
7. ನಿರ್ದೇಶಕರು, ಪ್ರೌಢಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ.
8. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗು ಕಲಬುರ್ಗಿ ವಿಭಾಗಗಳು

ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.